# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **941**

ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 12-03-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿರುವ ಆಶಾಪೂರ್ ರಸ್ತೆ, ಜವಹಾರನಗರ, ಕಾಡ್ಲೂರು, ನೀರಮಾನ್ವಿ ಹತ್ತಿರ 110/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯಲ್ಲಿರುವ ಆಶಾಪೂರ್ ರಸ್ತೆ, ಜವಹಾರನಗರ, ಕಾಡ್ಲೂರು, ನೀರಮಾನ್ವಿ ಹತ್ತಿರ 110/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಕ.ವಿ.ಪ್ರ.ನಿ.ನಿ ವತಿಯಿಂದ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಕೆಳಕಂಡಂತಿವೆ:<br><br>1. **ಆಶಾಪೂರ್ ರಸ್ತೆಯಲ್ಲಿ** ಹೊಸದಾಗಿ ಸ್ಥಾಪಿಸುವ 110/11 ಕೆವಿ ವಿದ್ಯುತ್ ಉಪಕೇಂದ್ರದ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನಿನ ಹಂಚಿಕೆಗಾಗಿ ಜಿಲ್ಲಾಧಿಕಾರಿ, ರಾಯಚೂರು ರವರನ್ನು ಕೋರಲಾಗಿದೆ.<br>2. **ಜವಹಾರನಗರದಲ್ಲಿ** ಹಾಲಿ ಇರುವ 33/11 ಕೆವಿ ವಿದ್ಯುತ್ ಉಪಕೇಂದ್ರವನ್ನು 110/11 ಕೆವಿ ವಿದ್ಯುತ್ ಉಪಕೇಂದ್ರವನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ಈ ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸುವ ಹಂತದಲ್ಲಿರುತ್ತದೆ.<br>3. **ಕಾಡ್ಲೂರಲ್ಲಿ** ಹೊಸದಾಗಿ ಸ್ಥಾಪಿಸುವ 110/11 ಕೆವಿ ವಿದ್ಯುತ್ ಉಪಕೇಂದ್ರದ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನು ಕ.ವಿ.ಪ್ರ.ನಿ.ನಿ.ಗೆ ಹಂಚಿಕೆಯಾಗಿದ್ದು, ಅಂದಾಜು ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.<br>4. **ನೀರಮಾನ್ವಿ (ಹರವಿ)** ಯಲ್ಲಿ ಹೊಸದಾಗಿ 110/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ದಿನಾಂಕ 31-03-2016 ಕ್ಕಿಂತ ಮುಂಚೆಯೇ ಅನುಮೋದನೆಗೊಂಡಿರುತ್ತದೆ ಹಾಗೂ ಸದರಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನನ್ನು ಖರೀದಿಸಲಾಗಿರುತ್ತದೆ. |

...2

| | | |
|---|---|---|
| | | **ಆದರೆ,** ದಿನಾಂಕ 04-12-2018 ರಂದು ನಡೆದ 79ನೇ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ದಿನಾಂಕ 31-3-2016 ಕ್ಕಿಂತ ಮುಂಚೆ ಅನುಮೋದನೆ ಪಡೆದ ಎಲ್ಲಾ ಪ್ರಸ್ತಾವನೆಗಳನ್ನು ರದ್ದುಗೊಳಿಸಲು ನಿರ್ಣಯಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ನೀರಮಾನ್ವಿ (ಹರವಿ) ಯಲ್ಲಿ ಹೊಸದಾಗಿ 110/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಪುನರ್ ಪರಿಶೀಲಿಸಲು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ಸೂಚಿಸಲಾಗಿರುತ್ತದೆ. |
| ಆ) | ರಾಯಚೂರು ತಾಲ್ಲೂಕಿನ ಶಕ್ತಿನಗರದ ಹತ್ತಿರ GESCOM ಉಪ ವಿಭಾಗ ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರಿನ ಶಕ್ತಿನಗರದಲ್ಲಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಉಪವಿಭಾಗವನ್ನು ಸ್ಥಾಪಿಸುವ ಪ್ರಸ್ತಾವನೆಯ ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ:** ಎನರ್ಜಿ 54 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ